**JANUARY 1,2025**
**ALL INDIA RADIO- DHARWAD**
**PRADESH SAMACHARA (KANNADA) 12PM**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವವರು: ವಿವೇಕಾದಿತ್ಯ ಕನಿಯಾಲ**

<><><>

**ಇಂದು, ಹೊಸ ಕ್ಯಾಲೆಂಡರ ವರ್ಷ– 2025** ರ ಮೊದಲ ದಿನ. ಈ ಸಂದರ್ಭ ಗಣ್ಯರು ನಾಡಿನ ಜನತೆಗೆ ಶುಭಾಶಯ ಕೋರಿದ್ದಾರೆ. ಕೇಂದ್ರ ನವ ಹಾಗೂ ನವೀಕರಿಸಬಹುದಾದ ಇಂಧನಗಳ ಖಾತೆ ಸಚಿವರಾದ ಪ್ರಲ್ಹಾದ್ ಜೋಶಿ, ತಮ್ಮ ಎಕ್ಸ್ ಖಾತೆಯಲ್ಲಿ ಹೊಸ ವರ್ಷದ ಶುಭಾಶಯಗಳನ್ನು ತಿಳಿಸಿದ್ದು, ಹೊಸ ವರ್ಷವು ಎಲ್ಲರ ಬಾಳಲ್ಲಿ ಸುಖ, ಶಾಂತಿ, ಸಮೃದ್ಧಿ, ಆರೋಗ್ಯ ಹಾಗೂ ನೆಮ್ಮದಿಯನ್ನು ತರಲಿ ಎಂದು ಆಶಿಸಿದ್ದಾರೆ. ನೂತನ ಕ್ಯಾಲೆಂಡರ್ ವರ್ಷವು ಎಲ್ಲರ ಬದುಕಿನಲ್ಲಿ ಹೊಸತನವನ್ನು ಮೂಡಿಸಲಿ. ಎಲ್ಲ ಕೋರಿಕೆ, ಅಭಿಲಾಷೆಗಳು ಈಡೇರಲಿ. ಹೊಸ ಭರವಸೆ, ಹುರುಪಿನೊಂದಿಗೆ 2025 ಅನ್ನು ಸ್ವಾಗತಿಸೋಣ ಎಂದು ರಾಜ್ಯ ಕಾರ್ಮಿಕ ಖಾತೆ ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಲಾಡ್ ಹೊಸ ವರ್ಷದ ಶುಭಾಶಯ ಕೋರಿದ್ದಾರೆ.

<><><>

**ಅಲ್ಪ ಜಮೀನಿನಲ್ಲಿ ಸಾವಯವ,** ಒಣಬೇಸಾಯ ಪದ್ಧತಿಯಲ್ಲಿ ವಿವಿಧ ಗಿಡ ಮರ, ಗೆಡ್ಡೆಗೆಣಸು, ಸಿರಿಧಾನ್ಯ ಸಹಿತ ಇತರೆ ಬೆಳೆ ಬೆಳೆದು ಅಧಿಕ ಲಾಭ ಪಡೆಯುತ್ತಿದ್ದಾರೆ, ಹಾವೇರಿ ಜಿಲ್ಲೆ, ಶಿಗ್ಗಾಂವಿ ತಾಲೂಕು, ಮುಗಳಿ ಗ್ರಾಮದ ಯುವ ಕೃಷಿಕ ನಾಗರಾಜ ಹುಲಗೂರ ಅವರು. ನವದೆಹಲಿ, ಕೃಷಿ ಮಂತ್ರಾಲಯದ ಅಧೀನದಲ್ಲಿ ಜರುಗಿದ ಕಾರ್ಯಕ್ರಮದಲ್ಲಿ ‘ಸಾಂಪ್ರದಾಯಿಕ ಬೀಜಸಂರಕ್ಷಕ’ ಪುರಸ್ಕಾರ ಸ್ವೀಕರಿಸಿರುವ ನಾಗರಾಜ ಹುಲಗೂರ ಅವರು ಪ್ರದೇಶ ಸಮಾಚಾರದೊಂದಿಗೆ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

<><><>

**ಬೈಟ್: ನಾಗರಾಜ ಹುಲಗೂರ 35 ಸೆಕೆಂದುಗಳು**

<><><>

**ಬೆಳಗಾವಿ ಜಿಲ್ಲೆಯ ಸವದತ್ತಿ** ತಾಲೂಕಿನ ಶ್ರೀ ಯಲ್ಲಮ್ಮಾದೇವಿ ಜಾತ್ರೆಯು 9 ನೇ ತಾರೀಖಿನಿಂದ 19 ರ ವರೆಗೆ ಜರುಗಲಿದೆ. ಜಾತ್ರೆಗೆ ಬೆಳಗಾವಿ ಕೇಂದ್ರ ಬಸ್ ನಿಲ್ದಾಣ ಹಾಗೂ ನಗರ ಬಸ್ ನಿಲ್ದಾಣದಿಂದ ಪ್ರಯಾಣಿಕರಿಗೆ ಅನುಕೂಲವಾಗುವಂತೆ ವಿಶೇ ʼ ಸಾರಿಗೆ ವ್ಯವಸ್ಥೆ ಕಲ್ಪಿಸಲಾಗುತ್ತಿದೆ.ಬೆಳಗಾವಿ ಕೇಂದ್ರ ಬಸ್ ನಿಲ್ದಾಣದಲ್ಲಿ 9 ನೇ ತಾರೀಖಿನಿಂದ ಮುಂಗಡ ಬಸ್ ಕಾಯ್ದಿರಿಸುವ ಕೇಂದ್ರ ತೆರೆಯಲಾಗುತ್ತಿದೆ. ಬೆಳಗಾವಿ– 1ನೇ ಘಟಕದಲ್ಲಿಯೂ ಮುಂಗಡ ವಾಹನಗಳನ್ನು ಕಾಯ್ದಿರಿಸಬಹುದಾಗಿದೆ ಎಂದು ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಹಿರಿಯ ವಿಭಾಗೀಯ ನಿಯಂತ್ರಣಾಧಿಕಾರಿಗಳು ತಿಳಿಸಿದ್ದಾರೆ.

<><><>

**ಬೀದರ್ ಜಿಲ್ಲೆ, ಕರ್ನಾಟಕ ಪಶು ವೈದ್ಯಕೀಯ,** ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ, ಜನವರಿ 17ರಿಂದ ಮೂರು ದಿನಗಳ ಕಾಲ ನಡೆಯುವ ಜಾನುವಾರು ಮೇಳದ ಪ್ರಚಾರ ಅಭಿಯಾನಕ್ಕೆ ಭಾಲ್ಕಿಯಲ್ಲಿ ರಾಜ್ಯ ಅರಣ್ಯ, ಪರಿಸರ ಮತ್ತು ಜೀವಶಾಸ್ತ್ರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ಮೇಳದ ಭಿತ್ತಿ ಪತ್ರ ಬಿಡುಗಡೆ ಮಾಡುವ ಮೂಲಕ ಚಾಲನೆ ನೀಡಿದರು. ರೈತ ಬಾಂಧವರಿಗೆ ವಿಡಿಯೋ ಸಂದೇಶ ನೀಡಿರುವ ಸಚಿವರು – ಮೇಳದ ಉತ್ಕೃ ಟ ತಾಂತ್ರಿಕತೆಯ ಪ್ರದರ್ಶನದ ಲಾಭ ಎಲ್ಲರೂ ಪಡೆಯಬೇಕು ಎಂದು ಮನವಿ ಮಾಡಿದರು. ಇದೇ ಸಂದರ್ಭ ಭಾಲ್ಕಿ ಹಿರೇಮಠ ಸಂಸ್ಥಾನದಲ್ಲಿ, ಪೂಜ್ಯ ಬಸವಲಿಂಗಪಟ್ಟದ್ದೇವರು ಅವರು ವಿಡಿಯೋ ಸಂದೇಶ ನೀಡಿ, ಪಶು ಮೇಳಕ್ಕೆ ಶುಭ ಹಾರೈಸಿದರು.

<><><>

**ಜಮ್ಮುವಿನ ಪೂಂಚ್ ನಲ್ಲಿ** ಸೇನಾ ವಾಹನ ಅಪಘಾತದಲ್ಲಿ ಮರಣ ಹೊಂದಿದ ಕೊಡಗಿನ ಯೋಧ ಪಿ ದಿವಿನ್ ಅವರ ಅಂತ್ಯಕ್ರಿಯೆಗೆ ಸ್ವಗ್ರಾಮ ಕೊಡಗಿನ ಆಲೂರು ಸಿದ್ದಾಪುರದಲ್ಲಿ ಸಕಲ ಸಿದ್ಧತೆಗಳು ನಡೆದಿದೆ.

ಕುಶಾಲ ನಗರಕ್ಕೆ ಪಾರ್ಥಿವ ಶರೀರವನ್ನು ತಂದ ಸಂದರ್ಭ ನೂರಾರು ಮಂದಿ ಸಾರ್ವಜನಿಕರು ಹುತಾತ್ಮ ಯೋಧನ ಪಾರ್ಥಿವ ಶರೀರಕ್ಕೆ ಅಂತಿಮ ನಮನ ಸಲ್ಲಿಸಿದರು. ಇಂದು ಬೆಳಗ್ಗೆ ಕೊಡಗು ಜಿಲ್ಲಾಧಿಕಾರಿ ವೆಂಕಟರಾಜ ಅವರು ಪಾರ್ಥಿವ ಶರೀರಕ್ಕೆ ಪು ್ಪಗುಚ್ಛ ಇರಿಸಿ ಜಿಲ್ಲಾಡಳಿತದ ವತಿಯಿಂದ ಗೌರವ ನಮನ ಸಲ್ಲಿಸಿದರು.

<><><>

**ಪ್ರಗತಿಪರ ಹೋರಾಟಗಾರ,** ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ, ಸಂಚಾಲಕ, ಬೆಂಗಳೂರು ಕನಕ ನಗರದ ಲಕ್ಷ್ಮೀನಾರಾಯಣ ನಾಗವಾರ ಅವರು ನಿಧನರಾದರು. ಅವರಿಗೆ 58 ವರ್ಷ ವಯಸ್ಸಾಗಿತ್ತು. ಎಕ್ಸ್ ಖಾತೆಯಲ್ಲಿ ಸಂತಾಪ ಸೂಚಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಲಕ್ಷ್ಮೀನಾರಾಯಣ ನಾಗವಾರ ಅವರು ಸಂಘಟನೆ ಮತ್ತು ಹೋರಾಟದ ಮೂಲಕ ದನಿ ಇಲ್ಲದ ದಮನಿತ ಸಮುದಾಯಕ್ಕೆ ದನಿಯಾಗಿದ್ದರು ಎಂದಿದ್ದಾರೆ. ಇಂದು ಮಧ್ಯಾಹ್ನ 3 ಗಂಟೆಗೆ ನಾಗವಾರದಲ್ಲಿ ಅಂತಿಮ ಸಂಸ್ಕಾರ ನಡೆಯಲಿದೆ.

<><><>

**ನಾಳೆಯಿಂದ, ಈ ತಿಂಗಳ 30 ರವರೆಗೆ** ಶಿವಮೊಗ್ಗ ತಾಲ್ಲೂಕಿನ ಶಾಲಾ ವಿದ್ಯಾರ್ಥಿಗಳ ಆಧಾರ್ ತಿದ್ದುಪಡಿ ಬೃಹತ್ ಆಂದೋಲನ ಆಯೋಜಿಸಲಾಗಿದೆ. ಸರ್ಕಾರಿ ಪ್ರೌಢಶಾಲೆ ಕಾಚಿನಕಟ್ಟೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹೇಮಂತ್ ಎನ್, ಆಂದೋಲನಕ್ಕೆ ಚಾಲನೆ ನೀಡುವರು.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..**

<><><>